**ಸಾಕ್ಷಿಗೆ ದಿನಾಂಕಃ 18.02.2026 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತುಃ**

**ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಾದ ಶ್ರೀ ಎಂ.ಬಿ.ಎಸ್. ರವರಿಂದಃ**

1) ನಾನು ಈ ಪ್ರಕರಣದಲ್ಲಿ ಅರ್ಜಿದಾರನಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಬದಲಾಗಿ ನಾನು ಈ ದಿನ ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ನಾನು ಓದಿ ತಿಳಿದುಕೊಂಡು ನನ್ನ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣ ಪತ್ರವನ್ನು ನನ್ನ ಹೇಳಿಕೆಗೆ ಅನುಸಾರವಾಗಿ ನಮ್ಮ ವಕೀಲರು ಸಿದ್ಧಪಡಿಸಿದ್ದಾರೆ.

2) **ಪ್ರಥಮ ವರ್ತಮಾನ ವರದಿ** ಹಾಜರುಪಡಿಸಿದ್ದು ಅದನ್ನು ನಿ.ಪಿ.**1** ಎಂದು**,** **ಪೋಲಿಸರಿಗೆ ನೀಡಿರುವ ದೂರನ್ನು** ನಿ.ಪಿ.**2** ಎಂದು ಗುರುತಿಸಿದೆ.

3) ಕೃತ್ಯ ನಡೆದ ಸ್ಥಳದ ಪಂಚನಾಮೆಯನ್ನು ನಿ.ಪಿ.**3** ಎಂದು**,** ಕೃತ್ಯ ನಡೆದ ಸ್ಥಳದ ನಕ್ಷೆಯನ್ನು ನಿ.ಪಿ.**4** ಎಂದು**, Accident Inspection Report** ಗಳನ್ನು ನಿ.ಪಿ.**5** ಮತ್ತು ನಿ.ಪಿ.**6** ಎಂದು ಗುರುತಿಸಿದೆ.

4) **ಐ.ಎಂ.ವಿ ಕಾಯ್ದೆ ಕಲಂ 133** ರ ಅಡಿಯಲ್ಲಿ ನೀಡಿರುವಂತಹ **ನೋಟಿಸಿಗೆ ನೀಡಿರುವಂತಹ ಉತ್ತರವನ್ನು** ನಿ.ಪಿ.**7** ಎಂದು**,** ಮತ್ತು ಅಂತಿಮ ವರದಿಯನ್ನು ನಿ.ಪಿ.**8** ಎಂದು ಗುರುತಿಸಿದೆ.

**ಸೂಚನೆಃ** ನಿ.ಪಿ.1 ರಿಂದ ನಿ.ಪಿ.8 ಎಂದು ಗುರುತು ಆಗಿರುವ ದಾಖಲೆಗಳು ಕೊರಟಗೆರೆ ಪೋಲಿಸ್ ಠಾಣೆಯವರು ನೀಡಿರುವಂತಹ ಯಥಾ ನಕಲುಗಳು ಆಗಿವೆ.

5) **ಬಿಡುಗಡೆ ಚರಿತ್ರೆ (ಡಿಸ್ಚಾರ್ಜ್ ಸಮ್ಮರಿ) ಗಳನ್ನು** ನಿ.ಪಿ.**9,** ನಿ.ಪಿ.**9(**ಎ**),** ನಿ.ಪಿ.**9(**ಬಿ**),** ನಿ.ಪಿ.**9(**ಸಿ**),** ನಿ.ಪಿ.**9(**ಡಿ**)** ಎಂದು ಗುರುತಿಸಿದೆ.

6) ಈಗ ಸಾಕ್ಷಿದಾರರು ತಮ್ಮ ಮೂಲ ಆಧಾರ್ ಕಾರ್ಡ್ ದಾಖಲೆ ಮತ್ತು ಇದೇ ದಾಖಲೆಯ ನೆರಳಚ್ಚು ಪ್ರತಿ**(photo copy)** ಅನ್ನು ಹಾಜರುಪಡಿಸಿದ್ದಾರೆ. ಸದರಿ ಮೂಲ ದಾಖಲೆಯನ್ನು ಮತ್ತು ನೆರಳಚ್ಚು ಪ್ರತಿ**(photo copy)** ಅನ್ನು ಹೋಲಿಕೆ ಮಾಡಿ ನೋಡಲಾಗಿ ಈ ಮೂಲ ದಾಖಲೆಯನ್ನು ಆಧಾರವಾಗಿ ಇಟ್ಟುಕೊಂಡು ಯಾಂತ್ರಿಕ ಸಹಾಯದಿಂದ ಈ ನೆರಳಚ್ಚು ಪ್ರತಿ**(photo copy)** ಅನ್ನು ಸಿದ್ಧಪಡಿಸಿದ್ದಾರೆ ಎಂದು ಕಂಡು ಬರುತ್ತದೆ. ಆದ ಕಾರಣದಿಂದ ಸದರಿ ನೆರಳಚ್ಚು ಪ್ರತಿ**(photo copy)** ಅನ್ನು ನಿ.ಪಿ.**10** ಎಂದು ಗುರುತಿಸಿದೆ ಮತ್ತು ಮೂಲ ದಾಖಲೆಯನ್ನು ಈ ಸಾಕ್ಷಿದಾರರಿಗೆ ವಾಪಸ್ಸು ನೀಡಿದೆ.

7) ಒಟ್ಟು **35** ಮೆಡಿಕಲ್ ಬಿಲ್ಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.**11** ಎಂದು ಗುರುತಿಸಿದೆ.

8) ವೈದ್ಯರು ನೀಡಿರುವ ಒಟ್ಟು **24** ಸಲಹಾ ಸೂಚಿ ಚೀಟಿ **(**ಮೆಡಿಕಲ್ ಪ್ರಿಸ್ಕ್ರಿಪ್ಷನ್**)** ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.**12** ಎಂದು ಗುರುತಿಸಿದೆ.

9) ಒಟ್ಟು **4** ಅಡ್ವಾನ್ಸ್ ರಶೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿ.ಪಿ.**13,** ನಿ.ಪಿ.**13(**ಎ**),** ನಿ.ಪಿ.**13(**ಬಿ**)** ಮತ್ತು ನಿ.ಪಿ.**13(**ಸಿ**)** ಎಂದು ಗುರುತಿಸಿದೆ.

**ಈ ಹಂತದಲ್ಲಿ ಮತ್ತೆ ಕೆಲವು ದಾಖಲೆಗಳನ್ನು ಹಾಜರುಪಡಿಸಲು ಸಾಕ್ಷಿದಾರರು ಸಮಯ ಕೇಳಿದ್ದಾರೆ, ಸಮಯ ನೀಡಿದೆ.**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ)

**(ಓ.ಹೇ.ಕೇ.ಸ.ಇ)**

**ಮುಖ್ಯ ನ್ಯಾಯಾಧೀಶರು,**
ಲಘು ವ್ಯವಹಾರಗಳ ನ್ಯಾಯಾಲಯ,
ಬೆಂಗಳೂರು.